# All India Radio: Bangalore

## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

## 27.05.2024 / 6.40 p.m.

******************

ಮುಖ್ಯಾಂಶಗಳು

1. ಶಿಕ್ಷಣಕ್ಕೆ ದೇಶದಲ್ಲಿ ಕ್ರಾಂತಿಕಾರಿ ಬದಲಾವಣೆ ತರಲು ಸಾಧ್ಯ; ಆಧುನಿಕ ತಂತ್ರಜ್ಞಾನದಿಂದ ದೇಶ ಸುಭದ್ರ- ಉಪ ರಾಷ್ಟ್ರಪತಿ ಜಗದೀಪ್ ಧನ್‌ಕರ್
2. ವಿಧಾನಪರಿಷತ್ತಿನ ೧೧ ಸ್ಥಾನಗಳಿಗೆ ದ್ವೈವಾರ್ಷಿಕ ಚುನಾವಣೆಗೆ ಇಂದು ಅಧಿಸೂಚನೆ ಪ್ರಕಟ; ಜೂನ್ ೧೩ ರಂದು ಮತದಾನ
3. ಇಂದು ದೇಶದ ಮೊದಲ ಪ್ರಧಾನಮಂತ್ರಿ ಜವಾಹರ್‌ಲಾಲ್ ನೆಹರು ಪುಣ್ಯತಿಥಿ; ದೇಶಾದ್ಯಂತ ಸ್ಮರಣೆ- ಗಣ್ಯರಿಂದ ನಮನ
4. ಮುಂದಿನ ೨೪ ಗಂಟೆಗಳಲ್ಲಿ ರಾಜ್ಯದ ಹಲವು ಜಿಲ್ಲೆಗಳಲ್ಲಿ ಮಳೆ - ಹವಾಮಾನ ಇಲಾಖೆ ಮುನ್ಸೂಚನೆ

******************

ದೇಶದಲ್ಲಿ ಕ್ರಾಂತಿಕಾರಿ ಬದಲಾವಣೆಯನ್ನು ತರಲು ಶಿಕ್ಷಣಕ್ಕೆ ಸಾಧ್ಯವಿದೆ. ಶಿಕ್ಷಣ ಸಮಾನತೆಯನ್ನು ಗೌರವಿಸುವ ಮನಸ್ಥಿತಿಯನ್ನು ಬೆಳೆಸುವುದರ ಜೊತೆಗೆ ಆಧುನಿಕ ತಂತ್ರಜ್ಞಾನದ ಪ್ರಗತಿಗೆ ದೇಶವನ್ನು ಸಜ್ಜಾಗಿಸುತ್ತದೆ ಎಂದು ಉಪ ರಾಷ್ಟ್ರಪತಿ ಜಗದೀಪ್ ಧನ್‌ಕರ್ ಹೇಳಿದ್ದಾರೆ.

ಬೆಂಗಳೂರಿನಲ್ಲಿಂದು ನ್ಯಾಷನಲ್ ಏರೋಸ್ಪೇಸ್ ಲ್ಯಾಬೊರೇಟರೀಸ್ ವಿನ್ಯಾಸಗೊಳಿಸಿ ಅಭಿವೃದ್ಧಿಪಡಿಸಿದ ದೇಶೀಯ ತರಬೇತುದಾರ ವಿಮಾನ ಹನ್ಸ ಎನ್‌ಜಿ ಯ ಹಾರಾಟ ಪ್ರದರ್ಶನವನ್ನು ವೀಕ್ಷಿಸಿ ಅವರು ಮಾತನಾಡಿದರು.

ಸುರಕ್ಷಿತ ಗಡಿಯನ್ನು ಖಾತರಿಪಡಿಸಿಕೊಳ್ಳಲು ಆಧುನಿಕ ತಂತ್ರಜ್ಞಾನದಲ್ಲಿ ಹೂಡಿಕೆ ಮಾಡುವುದು ಅಗತ್ಯವಾಗಿದೆ ಎಂದ ಅವರು, ಇಂದಿನ ಯುದ್ಧ ಚಿತ್ರಣ, ಹಿಂದಿನ ಯುದ್ಧದ ಚಿತ್ರಣಕ್ಕಿಂತ ಸಂಪೂರ್ಣ ಭಿನ್ನವಾಗಿದೆ. ಆಧುನಿಕ ತಂತ್ರಜ್ಞಾನದ ಅಭಿವೃದ್ಧಿ ದೇಶ ಎಷ್ಟು ಶಕ್ತಿಶಾಲಿ ಎಂಬುದನ್ನು ಸೂಚಿಸುತ್ತದೆ ಎಂದು ಹೇಳಿದರು.

ಇದಕ್ಕೂ ಮುನ್ನ ಬೆಳಗಾವಿಯಲ್ಲಿ ಅವರು, ರಾಷ್ಟ್ರೀಯ ಸಾಂಪ್ರದಾಯಿಕ ಔಷಧಾಲಯ ಹಾಗೂ ಸಂಶೋಧನಾ ಸಂಸ್ಥೆಯ ೧೮ನೇ ಸಂಸ್ಥಾಪನಾ ದಿನಾಚರಣೆಗೆ ಚಾಲನೆ ನೀಡಿದರು.

ಸಭೆಯನ್ನುದ್ದೇಶಿಸಿ ಮಾತನಾಡಿದ ಉಪರಾಷ್ಟ್ರಪತಿ, ಭಾರತ ಇಂದು ತನ್ನ ಸಾಂಪ್ರದಾಯಿಕ ಜ್ಞಾನ, ತಿಳುವಳಿಕೆ, ಆರೋಗ್ಯ ಮತ್ತು ಸಂಸ್ಕೃತಿಯ ಬಲದಿಂದ ಆಧುನಿಕ ಸವಾಲುಗಳನ್ನು ಸಮರ್ಥವಾಗಿ ಎದುರಿಸುವುದರ ಮೂಲಕ ಜಾಗತಿಕ ಮಟ್ಟದಲ್ಲಿ ವಿಶೇಷ ಗಮನ ಸೆಳೆದಿದೆ. ಆಧುನಿಕ ಜೀವನ ಶೈಲಿಯಲ್ಲಿ ಮಾನಸಿಕ ತೀವ್ರ ಒತ್ತಡದ ಸಂದರ್ಭದಲ್ಲಿ ಭಾರತೀಯ ಸಾಂಪ್ರದಾಯಿಕ ಯೋಗ, ಸಿದ್ಧಿ, ಆರೋಗ್ಯ ತಿಳುವಳಿಕೆ, ಸಮಾಜದ ಸ್ವಾಸ್ಥ್ಯ ಕಾಪಾಡುವಲ್ಲಿ ಪ್ರಧಾನ ಪಾತ್ರ ವಹಿಸುತ್ತವೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್, ಐಸಿಎಂಆರ್ ಪ್ರಧಾನ ನಿರ್ದೇಶಕ ರಾಜೀವ್ ಬಹ್ಲ್, ಜಿಂಟಿ ನಿರ್ದೇಶಕರಾದ ಅನು ನಗರ್, ಬೆಳಗಾವಿ ಐಸಿಎಂಆರ್ ನಿರ್ದೇಶಕ ಸುವರ್ಣ ರಾಯ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಬಳಿಕ ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್, ಕೆಎಲ್‌ಇ ವಿಶ್ವವಿದ್ಯಾಲಯದ ೧೪ನೇ ಘಟಿಕೋತ್ಸವ ಸಮಾರಂಭದಲ್ಲಿ ಪಾಲ್ಗೊಂಡರು.

ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಬೆಂಗಳೂರು ಭೇಟಿ ಹಿನ್ನೆಲೆ, ನಗರದಲ್ಲಿ ಬಿಗಿಬಂದೋಬಸ್ತ್ ಕೈಗೊಳ್ಳಲಾಗಿದ್ದು, ಹಲವು ರಸ್ತೆಗಳನ್ನು ಬಂದ್ ಮಾಡಲಾಗಿದೆ. ಇಂದು ರಾತ್ರಿ ೮ ಗಂಟೆಯ ವರೆಗೆ ಇನ್ಫೆಂಟ್ರಿ ರಸ್ತೆ ಕಬ್ಬನ್ ರಸ್ತೆ, ಎಂ.ಜಿ.ರಸ್ತೆ, ಹಳೆ ವಿಮಾನ ನಿಲ್ದಾಣ ರಸ್ತೆ, ವಿಂಡ್ ಟನಲ್ ರಸ್ತೆಗಳ ಬದಲಾಗಿ ಪರ್ಯಾಯ ರಸ್ತೆಗಳನ್ನು ಬಳಸುವ ಮೂಲಕ ಸಾರ್ವಜನಿಕರು ಸಹಕರಿಸಬೇಕು ಎಂದು ಬೆಂಗಳೂರು ಸಂಚಾರ ಪೊಲೀಸ್ ಇಲಾಖೆ ಕೋರಿದೆ.

******************

ರಾಜ್ಯ ವಿಧಾನಸಭೆಯಿಂದ ವಿಧಾನಪರಿಷತ್ತಿಗೆ ಆಯ್ಕೆಗೊಂಡಿದ್ದ ೧೧ ಸದಸ್ಯರು ಜೂನ್ ೧೭ ರಂದು ನಿವೃತ್ತರಾಗುತ್ತಿರುವ ಹಿನ್ನೆಲೆ ಅವರ ಸ್ಥಾನಗಳನ್ನು ತುಂಬಲು ವಿಧಾನಪರಿಷತ್ತಿಗೆ ದ್ವೈವಾರ್ಷಿಕ ಚುನಾವಣೆ ನಡೆಸಲು ಇಂದು ಅಧಿಸೂಚನೆ ಹೊರಬಿದ್ದಿದೆ.

ಈ ೧೧ ಸ್ಥಾನಗಳಿಗೆ ಜೂನ್ ೧೩ ರಂದು ಮತದಾನ ನಡೆಯಲಿದ್ದು, ಅಂದೇ ಸಂಜೆ ೫ ಗಂಟೆಗೆ ಮತ ಎಣಿಕೆ ಕಾರ್ಯ ನಡೆಯಲಿದೆ.

ಚುನಾವಣೆಗೆ ಸ್ಪರ್ಧಿಸಲಿಚ್ಛಿಸುವ ಅಭ್ಯರ್ಥಿಗಳು, ಇಂದಿನಿಂದ ಜೂನ್ ೩ರವರೆಗೆ ನಾಮಪತ್ರ ಸಲ್ಲಿಸಬಹುದಾಗಿದೆ. ಜೂನ್ ೪ ರಂದು ನಾಮಪತ್ರಗಳ ಪರಿಶೀಲನೆ ನಡೆಯಲಿದ್ದು, ಉಮೇದುವಾರಿಕೆ ಹಿಂಪಡೆಯಲು ಜೂನ್ ೬ ಕೊನೆಯ ದಿನವಾಗಿದೆ.

******************

ಸಾರ್ವತ್ರಿಕ ಲೋಕಸಭಾ ಚುನಾವಣೆ ಅಂಗವಾಗಿ ರಾಜ್ಯ ಮುಖ್ಯ ಚುನಾವಣಾಧಿಕಾರಿ ಕಚೇರಿ ವತಿಯಿಂದ ಮಾಧ್ಯಮ ಹಾಗೂ ಹವ್ಯಾಸಿ ಛಾಯಗ್ರಾಹಕರಿಗಾಗಿ ಹಮ್ಮಿಕೊಂಡಿದ್ದ ರಾಜ್ಯಮಟ್ಟದ ಛಾಯಚಿತ್ರ ಸ್ಪರ್ಧೆಯ ವಿಜೇತರನ್ನು ಇಂದು ಘೋಷಿಸಲಾಗಿದೆ.

ಮಂಗಳೂರಿನ ಹೆಚ್.ಫಕ್ರುದ್ದೀನ್ ಪ್ರಥಮ ಸ್ಥಾನ ಪಡೆದು ೨೫ ಸಾವಿರ ರೂಪಾಯಿ ಬಹುಮಾನ ಮೊತ್ತ ಗೆದ್ದಿದ್ದಾರೆ. ಬಾಗಲಕೋಟೆಯ ಇಂದ್ರಕುಮಾರ್.ಬಿ. ದಸ್ತೇನವರ ೧೫ ಸಾವಿರ ಬಹುಮಾನ ಮೊತ್ತದೊಂದಿಗೆ ದ್ವಿತಿಯ ಸ್ಥಾನ ಹಾಗೂ ಮೂಡಬಿದರೆಯ ದಿನೇಶ್ ಪ್ರಸಾದ್ ಮೂರನೇ ಸ್ಥಾನದೊಂದಿಗೆ ೧೦ ಸಾವಿರ ರೂಪಾಯಿ ಬಹುಮಾನ ಮೊತ್ತ ಗೆದ್ದಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

******************

ಇಂದು ಭಾರತದ ಪ್ರಥಮ ಪ್ರಧಾನಮಂತ್ರಿ ಪಂಡಿತ್ ಜವಹಾರ್‌ಲಾಲ್ ನೆಹರು ಅವರ ಪುಣ್ಯತಿಥಿ. ಅವರ ಸ್ಮರಣಾರ್ಥ ದೇಶಾದ್ಯಂತ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದ್ದು, ಅವರು ರೂಪಿಸಿದ ಪ್ರಮುಖ ನೀತಿಗಳು ಅವರ ಆದರ್ಶಮಯ ಜೀವನವನ್ನು ನೆನೆಪಿಸಿಕೊಳ್ಳಲಾಗುತ್ತಿದೆ.

ದೇಶದ ಮೊದಲ ಪ್ರಧಾನಿ, ಪಂಡಿತ್ ಜವಾಹರಲಾಲ್ ನೆಹರು ಅವರನ್ನು ಅವರ ಪುಣ್ಯದಿನದಂದು ಗೌರವ ಮತ್ತು ಕೃತಜ್ಞತೆಯಿಂದ ನೆನೆಯೋಣ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ, ಗುಲಾಮಗಿರಿಯಿಂದ ಜರ್ಜರಿತವಾಗಿದ್ದ ಭಾರತವನ್ನು ಆರ್ಥಿಕ ಅಭಿವೃದ್ಧಿ ಮತ್ತು ಸಾಮಾಜಿಕ ಸುಧಾರಣೆಯ ಕ್ರಮಗಳ ಮೂಲಕ ಸ್ವತಂತ್ರ, ಸ್ವಾವಲಂಬಿ ಮತ್ತು ಜಾತ್ಯತೀತ ರಾಷ್ಟ್ರವನ್ನಾಗಿ ಕಟ್ಟಿದ ನೆಹರು ಅವರ ಜನಪರ ಕಾಳಜಿ, ದೇಶಭಕ್ತಿ ಮತ್ತು ಪುರೋಗಾಮಿ ಚಿಂತನೆಗಳು ಎಲ್ಲರಿಗೂ ಆದರ್ಶ ಮತ್ತು ಸ್ಫೂರ್ತಿದಾಯಕ ಎಂದು ತಿಳಿಸಿದ್ದಾರೆ.

ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸ್ವತಂತ್ರ ಭಾರತದ ಮೊದಲ ಪ್ರಧಾನಿ, ಆಧುನಿಕ ಭಾರತದ ಶಿಲ್ಪಿ ಪಂಡಿತ್ ಜವಾಹರಲಾಲ್ ನೆಹರು ಅವರ ಪುಣ್ಯಸ್ಮರಣೆಯಂದು ಗೌರವ ನಮನಗಳನ್ನು ಸಲ್ಲಿಸುತ್ತೇನೆ. ನೆಹರು ಅವರ ವಿಚಾರಧಾರೆ, ಚಿಂತನೆಗಳು ಇಂದಿಗೂ ಕೂಡ ಜೀವಂತವಾಗಿವೆ ಎಂದು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಹೇಳಿದ್ದಾರೆ.

ಬೆಂಗಳೂರಿನ ಕೆಪಿಸಿಸಿ ಕಚೇರಿಯಲ್ಲಿಂದು ಪಂಡಿತ್ ಜವಹಾರ್‌ಲಾಲ್ ನೆಹರು ಪುಣ್ಯಸ್ಮರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

*****************

ಬಾಗಲಕೋಟೆ ನಗರದ ಜಿಲ್ಲಾ ಕಾರಗೃಹದಲ್ಲಿಂದು ಜಿಲ್ಲಾಡಳಿತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸೇರಿದಂತೆ ಇತರ ಇಲಾಖೆಗಳ ಸಹಯೋಗದಲ್ಲಿ ವಿಶ್ವ ಸ್ಕಿಜೋಫ್ರೇನಿಯಾ ದಿನಾಚರಣೆ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಮನೋರೋಗ ತಜ್ಞ ಡಾ.ರವಿ.ಸಿ.ಎ ರೋಗಿಯನ್ನು ಆಸ್ಪತ್ರೆಗೆ ಸೇರಿಸದೇ ಮನೆಯಲ್ಲಿಯೇ ಪರಿಣಾಮಕಾರಿ ಹಾಗೂ ಸರಳ ಔಷಧಿಗಳ ಆವಿಷ್ಕಾರದಿಂದ ಸ್ಕಿಜೋಫ್ರೇನಿಯಾ ರೋಗವನ್ನು ಗುಣಪಡಿಸಬಹುದಾಗಿದೆ. ಸ್ಕಿಜೋಫ್ರೇನಿಯಾ ಒಂದು ಮಾನಸಿಕ ಕಾಯಿಲೆ ಆಗಿದ್ದು, ದೈಹಿಕವಾಗಿ ಗೋಚರಿಸುವಂತಹ ಯಾವುದೇ ಲಕ್ಷಣಗಳು ಇರುವುದಿಲ್ಲ ಎಂದು ತಿಳಿಸಿದರು.

ಜಗತ್ತಿನ ಒಟ್ಟು ಜನಸಂಖ್ಯೆಯಲ್ಲಿ ಸುಮಾರು ೨೪ ಮಿನಿಯನ್ ವ್ಯಕ್ತಿಗಳು ಈ ರೋಗದಿಂದ ಬಳಲುತ್ತಿದ್ದಾರೆ. ಭಾರತದಲ್ಲಿ ೦.೪ ಮಿಲಿಯನ್ ರೋಗಿಗಳಿದ್ದಾರೆ. ಈ ರೋಗಕ್ಕೆ ತುತ್ತಾದರೆ ವಾಸಿಯಾಗುವದಿಲ್ಲವೆಂಬ ತಪ್ಪು ತಿಳುವಳಿಕೆ ಜನರಲ್ಲಿ ಮೂಡಿದೆ. ಇದನ್ನು ಹೋಗಲಾಡಿಸುವ ಉದ್ದೇಶದಿಂದ ವಿಶ್ವ ಸ್ಕಿಜೋಫ್ರೇನಿಯಾ ದಿನಾಚರಣೆ ಆಚರಿಸಲಾಗುತ್ತಿದೆ ಎಂದು ತಿಳಿಸಿದರು.

*****************

ಯಾದಗಿರಿ ಜಿಲ್ಲೆಯ ಗ್ರಾಮೀಣ ಹಾಗೂ ನಗರ ಪ್ರದೇಶಗಳ ವ್ಯಾಪ್ತಿಯಲ್ಲಿ ನಾಗರಿಕರಿಗೆ ಶುದ್ಧ ಕುಡಿಯುವ ನೀರನ್ನು ಪೂರೈಸಲು ಕ್ರಮ ಕೈಗೊಳ್ಳುವಂತೆ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ ಅವರು, ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಬರ ಪರಿಹಾರ ಹಾಗೂ ಕುಡಿಯುವ ನೀರು ಮತ್ತು ಮುಂಗಾರು ಪೂರ್ವ ಸಿದ್ಧತಾ ಸಭೆಯಲ್ಲಿ ಮಾತನಾಡಿದ ಅವರು, ಜನರಿಗೆ ಶುದ್ಧ ಕುಡಿಯುವ ನೀರು ಪೂರೈಕೆಯಾಗಬೇಕು. ಮುಂಗಾರು ಹಂಗಾಮಿನಲ್ಲಿ ರೈತರಿಗೆ ತೊಂದರೆ ಆಗದಂತೆ ನಿಗಾ ವಹಿಸಬೇಕು. ಅದರಂತೆ ಗಡಿ ಭಾಗಗಳಲ್ಲಿ ಕಳಪೆ ಬೀಜ ಮತ್ತು ರಸಗೊಬ್ಬರ ಆಮದು ಆಗದಂತೆ ಎಚ್ಚರಿಕೆ ವಹಿಸಬೇಕು. ರೈತರಿಗೆ ಮುಂದಿನ ದಿನಗಳಲ್ಲಿ ಉತ್ತಮ ಗುಣಮಟ್ಟದ ಬಿತ್ತನೆ ಬೀಜ ಮತ್ತು ರಸಗೊಬ್ಬರದ ಕೊರತೆ ಆಗದಂತೆ ಎಚ್ಚರಿಕೆವಹಿಸಿ ಅವಶ್ಯಕತೆಗೆ ಅನುಗುಣವಾಗಿ ದಾಸ್ತಾನು ಇಟ್ಟುಕೊಳ್ಳಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಇತ್ತೀಚೆಗೆ ಸುರಿದ ಭಾರಿ ಮಳೆಯಿಂದಾಗಿ ಮೂವರು ಸಾವನ್ನಪ್ಪಿದ್ದು ಅವರಿಗೆ ತಲಾ ೫ ಲಕ್ಷ ರೂಪಾಯಿಯಂತೆ ಪರಿಹಾರವನ್ನು ಅವರ ವಾರಸುದಾರರಿಗೆ ವಿತರಿಸಲಾಗಿದೆ. ಜಾನುವಾರುಗಳ ಹಾನಿಗೆ ಸಂಬಂಧಪಟ್ಟಂತೆ ಪರಿಹಾರ ವಿತರಿಸಲಾಗಿದೆ ಅವರು ತಿಳಿಸಿದರು.

*****************

ಮಳೆಗಾಲ ಆರಂಭವಾಗುವ ಮೊದಲೇ ಜಿಲ್ಲೆಯಲ್ಲಿ ಇರುವ ಎಲ್ಲ ಕುಡಿಯುವ ನೀರಿನ ಮೇಲ್ತೊಟ್ಟಿಗಳನ್ನು ಕಡ್ಡಾಯವಾಗಿ ಶುಚಿಗೊಳಿಸುವುದು ಸೇರಿದಂತೆ ಅಗತ್ಯ ಕ್ರಮ ಕೈಗೊಂಡು ಕುಡಿಯುವ ನೀರು ಮತ್ತು ನೈರ್ಮಲ್ಯಕ್ಕೆ ಪ್ರಥಮ ಪ್ರಾಶಸ್ತ್ಯ ನೀಡುವ ಅಗತ್ಯವಿದೆ ಎಂದು ಉತ್ತರಕನ್ನಡ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ್ ಕುಮಾರ್ ಕಾಂದೂ ಹೇಳಿದ್ದಾರೆ.

ಅವರು ಕಾರವಾರದಲ್ಲಿ ಜಲಜೀವನ್ ಮಿಷನ್, ಮನರೇಗಾ, ಆರ್ಥಿಕ ಶಾಖೆ, ಎಸ್‌ಬಿಎಮ್, ವಸತಿ ಸೇರಿದಂತೆ ವಿವಿಧ ಇಲಾಖೆಗಳು ಮತ್ತು ವಿವಿಧ ಯೋಜನೆಗಳ ಕುರಿತು ಜಿಲ್ಲಾ ಮಟ್ಟದ ಮಾಸಿಕ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಒಂದು ವೇಳೆ ತೆರೆದ ತೊಟ್ಟಿಗಳಿದ್ದರೆ ನೀರು ಕಲುಷಿತಗೊಳ್ಳದಂತೆ ಭದ್ರ ಮುಚ್ಚಳ ವ್ಯವಸ್ಥೆಯಾಗಬೇಕು. ಪೈಪ್‌ಲೈನ್‌ನಲ್ಲಿ ನೀರು ಸೋರಿಕೆ ನಿಯಂತ್ರಿಸಬೇಕು. ಖಾಸಗಿ ಕುಡಿಯುವ ನೀರಿನ ಮೂಲಗಳನ್ನು ಒಳಗೊಂಡಂತೆ ಎಲ್ಲ ಮೂಲಗಳಲ್ಲಿ ನಿಯಮಿತವಾಗಿ ನೀರಿನ ಪರೀಕ್ಷೆ ಮಾಡಬೇಕು. ಆ ಮೂಲಕ ಸಾರ್ವಜನಿಕರಿಗೆ ಶುದ್ಧ ಕುಡಿಯುವ ನೀರು ಒದಗಿಸಲು ಆದ್ಯತೆ ನೀಡಬೇಕು ಎಂದು ಅವರು, ಅಧಿಕಾರಿಗಳಿಗೆ ಸೂಚಿಸಿದ್ದಾರೆ.

*****************

ಅನುದಾನಿತ ಶಾಲೆಗಳಿಗೆ ಕಳೆದ ಒಂಬತ್ತು ವರ್ಷದಲ್ಲಿ ಶಿಕ್ಷಕರ ನೇಮಕವಾಗಿಲ್ಲ ಆದರೆ, ಆಯವ್ಯಯದಲ್ಲಿ ಶಿಕ್ಷಕರ ನೇಮಕಕ್ಕೆ ಅನುದಾನ ಮೀಸಲಿಡಲಾಗಿದೆ ಎಂದು ಶಿಕ್ಷಣ ಸಚಿವ ಮದು ಬಂಗಾರಪ್ಪ ತಿಳಿಸಿದ್ದಾರೆ.

ಚಿತ್ರದುರ್ಗದಲ್ಲಿ ಆಗ್ನೇಯ ಶಿಕ್ಷಕರ ಚುನಾವಣೆ ಹಿನ್ನಲೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಪರ ಮತಯಾಚಿಸಿ ಮಾತನಾಡಿದ ಅವರು, ಮುಂದಿನ ದಿನಗಳಲ್ಲಿ ಶಿಕ್ಷಕರ ನೇಮಕಾತಿ ಪ್ರಕ್ರಿಯೆಗೆ ಚಾಲನೆ ನೀಡಲಾಗುವುದು ಹಾಗೂ ಕೌನ್ಸಿಲಿಂಗ್‌ನಲ್ಲಿ ಶಿಕ್ಷಕರಿಗೆ ಆಗುತ್ತಿರುವ ಸಮಸ್ಯೆಗಳ ಬಗ್ಗೆ ಸರ್ಕಾರದ ಗಮನವಿದ್ದು, ಅವುಗಳನ್ನು ಬಗೆಹರಿಸಲಾಗುವುದು ಎಂದು ತಿಳಿಸಿದರು.

*****************

ಲೋಕಸಭಾ ಚುನಾವಣೆ ಹಿನ್ನಲೆ ಅಂಚೆ ಮತಪತ್ರಗಳ ಮತ ಎಣಿಕೆ ಸಿಬ್ಬಂದಿಗೆ ಮೊದಲ ಹಂತದ ತರಬೇತಿ ಕಾರ್ಯಾಗಾರ ಚಿತ್ರದುರ್ಗ ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಇಂದು ಸಹಾಯಕ ಚುನಾವಣಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಅಧ್ಯಕ್ಷತೆಯಲ್ಲಿ ಜರುಗಿತು.

ತರಬೇತಿ ಕಾರ್ಯಾಗಾರದಲ್ಲಿ ೧೨ ಸಹಾಯಕ ಮತ ಎಣಿಕೆ ಅಧಿಕಾರಿಗಳು, ೧೩ ತಂಡಗಳ ಮತ ಎಣಿಕೆ ಸಿಬ್ಬಂದಿಗೆ ತರಬೇತಿ ನಡೆಯಿತು. ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಅಂಚೆ ಮತಪತ್ರಗಳ ಮತ ಎಣಿಕೆ ಸಿಬ್ಬಂದಿಗೆ ಸೂಕ್ತ ಮಾರ್ಗದರ್ಶನ ನೀಡಿದರು.

*****************

ದಾವಣಗೆರೆಯ ಚೆನ್ನಗಿರಿ ಪೊಲೀಸ್ ಠಾಣೆಯ ಮೇಲಿನ ದಾಳಿ ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸರು ೨೫ ಮಂದಿಯನ್ನು ಬಂಧಿಸಿದ್ದು, ೩೦ ಮಂದಿಯನ್ನು ವಶಕ್ಕೆ ಪಡೆದಿದ್ದಾರೆ.

ಹಿಂಸಾಚಾರ ಸಂಭವಿಸಿದ ಸ್ಥಳದಲ್ಲಿನ ಸಿಸಿಟಿವಿ ದೃಶ್ಯಾವಳಿ ಆಧರಿಸಿ ಆರೋಪಿಗಳನ್ನು ಬಂಧಿಸಲಾಗಿದೆ. ಈಗಾಗಲೇ ಸರ್ಕಾರ ಪ್ರಕರಣದ ತನಿಖೆಯನ್ನು ಸಿಐಡಿಗೆ ಒಪ್ಪಿಸಿದೆ. ತನಿಖೆಗಾಗಿ ಐದು ಪೊಲೀಸ್ ತಂಡಗಳನ್ನು ರಚಿಸಲಾಗಿದೆ. ಇಂದು ಆರೋಪಿಗಳನ್ನು ಸಿಐಡಿ ಪೊಲೀಸರು ನ್ಯಾಯಾಲಯದ ಎದುರು ಹಾಜರುಪಡಿಸಲಿದ್ದಾರೆ.

ಆದಿಲ್ ಎಂಬಾತನನ್ನು ಇದೇ ತಿಂಗಳ ೨೪ರಂದು ಬಂಧಿಸಿ ಪೊಲೀಸ್ ಠಾಣೆಗೆ ಕರೆದೊಯ್ಯಲಾಗಿತ್ತು. ಆರೋಗ್ಯ ಸ್ಥಿತಿ ಹದಗೆಟ್ಟ ಹಿನ್ನಲೆಯಲ್ಲಿ ಆತ ಠಾಣೆಯಲ್ಲಿಯೇ ಮೃತಪಟ್ಟಿದ್ದ. ಆದಿಲ್ ಅವರದ್ದು ಲಾಕಪ್ ಡೆತ್ ಎಂದು ಆರೋಪಿಸಿ ಉದ್ರಿಕ್ತರ ಗುಂಪು ಶುಕ್ರವಾರ ತಡರಾತ್ರಿ ಪೊಲೀಸ್ ಠಾಣೆ ಮೇಲೆ ಕಲ್ಲು ತೂರಾಟ ನಡೆಸಿತ್ತು.

*****************

ಕೃಷಿ ಚಟುವಟಿಕೆಗೆ ಅವಶ್ಯಕತೆ ಇರುವ ಗುಣಮಟ್ಟದ ಭಿತ್ತನೆ ಬೀಜ, ರಸಗೊಬ್ಬರ ಸಮರ್ಪಕವಾಗಿ ವಿತರಿಸಿ, ಕೃತಕ ಅಭಾವ ಸೃಷ್ಟಿ ಮಾಡಿ ದುಬಾರಿ ಬೆಲೆಗೆ ಭಿತ್ತನೆ ಬೀಜ ರಸಗೊಬ್ಬರ ಮಾರಾಟ ಮಾಡುವ ಖಾಸಗಿ ಅಂಗಡಿಗಳ ವಿರುದ್ಧ ಕ್ರಮ ಕೈಗೊಳ್ಳಲು ವಿಶೇಷ ತಂಡ ರಚನೆ ಮಾಡಬೇಕೆಂದು ಕೋಲಾರ ಜಿಲ್ಲೆ ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ ರವಿಕುಮಾರ್ ಅವರಿಗೆ ರೈತ ಸಂಘ ಮನವಿ ಸಲ್ಲಿಸಿದೆ.

ರೈತರ ಹೊಲ ಉಳುಮೆ ಮಾಡಿ ಬಿತ್ತನೆ ಮಾಡಲು ಅವಶ್ಯಕತೆ ಇರುವ ಟ್ರ್ಯಾಕ್ಟರ್ ವ್ಯವಸ್ಥೆಯನ್ನು ಸಬ್ಸಿಡಿ ದರದಲ್ಲಿ ಒದಗಿಸಲು ಜಿಲ್ಲಾಡಳಿತ ಕ್ರಮಗೊಳ್ಳಬೇಕು ಎಂದು ರೈತ ಸಂಘದ ಉಪಾಧ್ಯಕ್ಷ ಕೆ.ನಾರಾಯಣ ಗೌಡ ಒತ್ತಾಯಿಸಿದ್ದಾರೆ.

*****************

ಮಹಿಳಾ ವಿದ್ಯಾರ್ಥಿನಿಯರ ವಸತಿ ನಿಲಯಗಳಲ್ಲಿ ಸುರಕ್ಷತಾ ಕ್ರಮಗಳನ್ನು ಅನುಸರಿಸುವುದರ ಜೊತೆಗೆ ಜಿಲ್ಲೆಯ ವಸತಿ ನಿಲಯಗಳಲ್ಲಿ ಕಡ್ಡಾಯವಾಗಿ ಸಿಸಿ ಕ್ಯಾಮೆರಾಗಳು ಸುಸ್ಥಿತಿಯಲ್ಲಿರಬೇಕು ಎಂದು ಚಿತ್ರದುರ್ಗ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಅಧಿಕಾರಿಗಳ ಸಭೆಯಲ್ಲಿ ಮಾತನಾಡಿದ ಅವರು, ಒಂದು ವೇಳೆ ಸಿಸಿ ಕ್ಯಾಮೆರಾಗಳ ದುರಸ್ಥಿ ಇದ್ದರೆ ಅದನ್ನು ಕೂಡಲೇ ಸರಿಪಡಿಸಿ ಚಾಲನೆಯಲ್ಲಿ ಇರುವಂತೆ ನೋಡಿಕೊಳ್ಳಬೇಕು. ಜಿಲ್ಲೆಯಲ್ಲಿರುವ ಎಲ್ಲಾ ವಸತಿನಿಲಯಗಳಲ್ಲಿ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಸೇರಿದಂತೆ ಇತರ ಅಗತ್ಯ ಮೂಲಸೌಕರ್ಯಗಳನ್ನು ಒದಗಿಸಬೇಕು ಎಂದರು.

ಜಿಲ್ಲಾ ಮತ್ತು ತಾಲ್ಲೂಕುಮಟ್ಟದ ಅಧಿಕಾರಿಗಳು ಅನಿರೀಕ್ಷಿತ ಭೇಟಿ ನೀಡಿ, ವಸತಿ ನಿಲಯಗಳ ಮತ್ತು ವಿದ್ಯಾರ್ಥಿಗಳ ಬಗ್ಗೆ ಮಾಹಿತಿ ಪಡೆದು, ಪರಿಶೀಲಿಸಿ ವರದಿ ನೀಡಬೇಕು ಎಂದು ಎಸ್.ಜೆ.ಸೋಮಶೇಖರ್ ಹೇಳಿದರು.

*****************

ವಿಜಯನಗರ ಜಿಲ್ಲೆಯ ಹಗರಿಬೊಮ್ಮನಹಳ್ಳಿ ತಾಲ್ಲೂಕಿನ ಮಾಲವಿ ತೋಟಗಾರಿಕೆ ತರಬೇತಿ ಕೇಂದ್ರದಲ್ಲಿ ಜೂನ್ ೧೫ ರಿಂದ ಮಾರ್ಚ್ ೩೧ರವರೆಗೆ ೧೦ ತಿಂಗಳ ಕಾಲ ನಡೆಯುವ ತೋಟಗಾರಿಕೆ ತರಬೇತಿಗಾಗಿ ಜಿಲ್ಲೆಯ ಆಸಕ್ತ ಅಭ್ಯರ್ಥಿಗಳಿಂದ ತೋಟಗಾರಿಕಾ ಇಲಾಖೆ ಅರ್ಜಿ ಆಹ್ವಾನಿಸಿದೆ.

ಜಿಲ್ಲೆಯ ರೈತ ಮಕ್ಕಳ ಪುರುಷ ಮತ್ತು ಮಹಿಳೆ ಅಭ್ಯರ್ಥಿಗಳು ಅರ್ಜಿಯನ್ನು ಜೂನ್ ೩ರೊಳಗೆ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಕನಿಷ್ಠ ಎಸ್.ಎಸ್.ಎಲ್.ಸಿ ಉತ್ತೀರ್ಣರಾಗಿಬೇಕು. ಅಭ್ಯರ್ಥಿಯ ತಂದೆ, ತಾಯಿ ಅಥವಾ ಪೋಷಕರು ಕಡ್ಡಾಯವಾಗಿ ಜಮೀನು ಹೊಂದಿರಬೇಕು ಎಂದು ತೋಟಗಾರಿಕೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

*****************

ಲೋಕಸಭಾ ಚುನಾವಣೆಯ ಬಳಿಕ ನಾಪತ್ತೆಯಾಗಿದ್ದ ಸಂಸದ ಪ್ರಜ್ವಲ್ ರೇವಣ್ಣ ಸಾಮಾಜಿಕ ಮಾಧ್ಯಮದ ಮೂಲಕ ವೀಡಿಯೋ ಸಂದೇಶವೊಂದನ್ನು ಕಳುಹಿಸಿದ್ದಾರೆ.

ವಿದೇಶದಿಂದ ಕಳುಹಿಸಿರುವ ವಿಡಿಯೋ ಸಂದೇಶದಲ್ಲಿ ಮೇ ೩೧ ರಂದು ತಾನು ರಾಜ್ಯಕ್ಕೆ ಮರಳಲಿದ್ದೇನೆ ಎಂದು ಪ್ರಜ್ವಲ್ ರೇವಣ್ಣ ಹೇಳಿದ್ದಾರೆ.

ಬೆಂಗಳೂರಿಗೆ ಬಂದು ಶುಕ್ರವಾರ ಬೆಳಗ್ಗೆ ೧೦ ಗಂಟೆಗೆ ಎಸ್‌ಐಟಿ ಅಧಿಕಾರಿಗಳ ಮುಂದೆ ಹಾಜರಾಗಿ ಉತ್ತರ ನೀಡುವುದಾಗಿ ತಿಳಿಸಿರುವ ಅವರು, ಇದೇ ವೇಳೆ ಕುಟುಂಬಸ್ಥರು ಮತ್ತು ರಾಜ್ಯದ ಜನತೆಯಲ್ಲಿ ಕ್ಷಮೆಯಾಚಿಸಿದ್ದಾರೆ.

ವಿದೇಶಕ್ಕೆ ಹೋಗುವ ಬಗ್ಗೆ ಮೊದಲೇ ನಿರ್ಧಾರವಾಗಿತ್ತು. ವಿದೇಶಕ್ಕೆ ಹೋಗುವಾಗ ತನ್ನ ಮೇಲೆ ಯಾವುದೇ ಆರೋಪ ಇರಲಿಲ್ಲ. ನಾನು ವಿದೇಶದಲ್ಲಿದ್ದಾಗ ತನ್ನ ಮೇಲೆ ಗಂಭೀರ ಆರೋಪ ಬಂದಿರುವುದು ತಿಳಿದುಬಂದಿತ್ತು. ತಾನು ರಾಜಕೀಯವಾಗಿ ಬೆಳೆಯಬಾರದು ಎಂಬ ಕಾರಣಕ್ಕೆ ತನ್ನ ಮೇಲೆ ಪಿತೂರಿ ಮಾಡಲಾಗಿದೆ ಎಂದು ದೂರಿದ್ದಾರೆ.

ತನಗೆ ನ್ಯಾಯಾಲಯದ ಮೇಲೆ ನಂಬಿಕೆಯಿದ್ದು, ಈ ಸುಳ್ಳು ಪ್ರಕರಣದಿಂದ ಹೊರ ಬರುವ ವಿಶ್ವಾಸವಿದೆ ಎಂದು ಹೇಳಿದ್ದಾರೆ.

ಇನ್ನು ಹವಾವರ್ತಮಾನ...

ರಾಜ್ಯದ ಕರಾವಳಿ ಹಾಗೂ ಉತ್ತರ ಒಳನಾಡಿನ ಕೆಲವು ಕಡೆಗಳಲ್ಲಿ ಮಳೆಯಾಗಿದೆ. ದಕ್ಷಿಣ ಒಳನಾಡಿನ ಒಂದೆರಡು ಕಡೆಗಳಲ್ಲಿ ಮಳೆಯಾಗಿದೆ ಎಂದು ಭಾರತೀಯ ಹವಾಮಾನ ಇಲಾಖೆ ತಿಳಿಸಿದೆ.

ಯಾದಗಿರಿ ಜಿಲ್ಲೆಯ ನಾರಾಯಣ ಪುರ, ಹುಣಸಗಿ, ಕೆಂಬಾವಿ, ಬಾಗಲಕೋಟೆ ಜಿಲ್ಲೆಯ ಇಳಕಲ್‌ನಲ್ಲಿ ತಲಾ ೫ ಸೆಂಟಿಮೀಟರ್ ಮಳೆಯಾಗಿದೆ. ಕೊಪ್ಪಳ ೪, ರಾಯಚೂರು, ವಿಜಯಪರ ಜಿಲ್ಲೆಗಳ ಕೆಲವೆಡೆ ತಲಾ ೨ ಸೆಂಟಿ ಮೀಟರ್ ಮಳೆಯಾಗಿದೆ.

ದಕ್ಷಿಣ ಒಳನಾಡಿನ ದಾವಣಗೆರೆ, ವಿಜಯನಗರ, ಬಳ್ಳಾರಿ ಜಿಲ್ಲೆಗಳಲ್ಲಿ ಅಲ್ಲಲ್ಲಿ ೧ ಸೆಂಟಿ ಮೀಟರ್ ಮಳೆಯಾಗಿದೆ.

ರಾಜ್ಯದಲ್ಲಿ ಅತಿ ಗರಿಷ್ಠ ಉಷ್ಣಾಂಶ ೪೧.೨ ಡಿಗ್ರಿ ಸೆಲ್ಸಿಯಸ್ ಕಲಬುರಗಿಯಲ್ಲಿ ದಾಖಲಾಗಿದೆ.

ಮುಂದಿನ ೨೪ ಗಂಟೆಗಳಲ್ಲಿ ದಕ್ಷಿಣ ಕನ್ನಡ, ಬೀದರ್, ಕಲಬುರಗಿ, ಯಾದಗಿರಿ, ಸಾಧಾರಣ ಗುಡುಗು ಸಹಿತ ಮಳೆಯಾಗಲಿದ್ದು, ರಾಜ್ಯದ ಉಳಿದ ಜಿಲ್ಲೆಗಳಲ್ಲಿ ಹಗುರದಿಂದ ಗುಡುಗ ಸಹಿತ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

ಮುಂದಿನ ಐದು ದಿನಗಳವರೆಗೆ ಗರಿಷ್ಠ ತಾಪಮಾನದಲ್ಲಿ ಯಾವುದೇ ಬದಲಾವಣೆಗಳು ಇರುವುದಿಲ್ಲ. ಬೆಂಗಳೂರು ಸುತ್ತಮುತ್ತ ಮೋಡಕವಿದ ವಾತಾವರಣವಿರಲಿದ್ದು, ಹಗುರ ಮಳೆಯಾಗುವ ಸಾಧ್ಯತೆ ಇದೆ.

ಗರಿಷ್ಠ ತಾಪಮಾನ ೩೦ ಹಾಗೂ ಕನಿಷ್ಠ ೨೧ ಡಿಗ್ರಿ ಸೆಲ್ಸಿಯಸ್ ದಾಖಲಾಗುವ ನೀರಿಕ್ಷೆಯಿದೆ ಎಂದು ಇಲಾಖೆ ತಿಳಿಸಿದೆ.

*********ಮುಕ್ತಾಯ********